# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕಲಬುರಗಿ ಜಿಲ್ಲೆ, ಆಳಂದ ತಾಲ್ಲೂಕಿನ ನರೋಣಾ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ನಿರ್ವಹಿಸಲಾದ ಕಾಮಗಾರಿಗಳಲ್ಲಿ ಅವ್ಯವಹಾರವೆಸಗಿದ ಅಧಿಕಾರಿ / ನೌಕರರ ವಿರುದ್ಧ ಶಿಸ್ತು ಕ್ರಮ – ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸುವ ಬಗ್ಗೆ – ಆದೇಶ.

ಓದಲಾಗಿದೆ:-1. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ : Compt / Uplok / GLB-8529/ 2015 /DRE-3, ದಿನಾಂಕ. 10.08.2018.

2. ಮಾನ್ಯ ಉಪಲೋಕಾಯುಕ್ತ-1ರವರ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ: Compt / Uplok / GLB-8529/ 2015 /DRE-3, ದಿನಾಂಕ. 04.08.2018.

*****

ಪ್ರಸ್ತಾವನೆ:-

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 10.08.2018ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತ-1ರವರು ಲೋಕಾಯುಕ್ತ ಕಾಯ್ದೆ ಕಲಂ 12(3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಕಲಬುರಗಿ ಜಿಲ್ಲೆ ಆಳಂದ ತಾಲ್ಲೂಕಿನ ನರೋಣಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ 2013-14 ಮತ್ತು 2014-15ನೇ ಸಾಲಿನಲ್ಲಿ ಕೈಗೊಳ್ಳಲಾಗಿರುವ ಎಂ.ಜಿ.ಎನ್.ಆರ್.ಇ.ಜಿ.ಎ ಹಾಗೂ ಇತರೆ ಯೋಜನೆಗಳ ಕಾಮಗಾರಿಗಳಲ್ಲಿ ಅವ್ಯವಹಾರ ನಡೆದಿದೆ ಎಂದು, ಆಪಾದಿಸಿ, ಇದಕ್ಕೆ ಈ ಕೆಳಕಂಡ ಸರ್ಕಾರಿ ನೌಕರರು ಹಾಗೂ ಜನಪ್ರತಿನಿಧಿ ರವರುಗಳು ಕಾರಣರಾಗಿರುತ್ತಾರೆಂದು ಶ್ರೀ ಬಸವರಾಜ ತಂದೆ ಸಿದ್ರಾಮಪ್ಪ ಚೆಕ್ಕಿ ಇವರು ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ:-

1. ಅಧ್ಯಕ್ಷರು, ನರೋಣಾ ಗ್ರಾಮ ಪಂಚಾಯತಿ, ಆಳಂದ ತಾಲ್ಲೂಕ್, ಕಲಬುರಗಿ ಜಿಲ್ಲೆ.
2. ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಆಳಂದ, ಜಿಲ್ಲೆ ಕಲಬುರಗಿ.
3. ತಾಲ್ಲೂಕು ಕೃಷಿ ಅಧಿಕಾರಿ/ಜಲಾನಯನ ಅಧಿಕಾರಿ, ಆಳಂದ
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನರೋಣಾ ಗ್ರಾಮ ಪಂಚಾಯಿತಿ, ಆಳಂದ ತಾಲ್ಲೂಕ್, ಕಲಬುರಗಿ ಜಿಲ್ಲೆ
5. ತಾಲ್ಲೂಕು ಅರಣ್ಯ ಅಧಿಕಾರಿ, ಆಳಂದ

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯ ತಾಂತ್ರಿಕ ವಿಭಾಗವು ತನಿಖೆ ನಡೆಸಿ ಸಲ್ಲಿಸಿರುವ ತನಿಖಾ ವರದಿಯಲ್ಲಿ ಕೆಳಕಂಡ ಅಂಶಗಳು ವ್ಯಕ್ತವಾಗುತ್ತವೆ:–

1. ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಎನ್ನುವವರ ಹೊಲದ ಪಕ್ಕದಲ್ಲಿ "ಭೀಮಾಬಾಯಿ ದಾದು ಹೊಲದಿಂದ ಮಲ್ಲಿಕಾರ್ಜುನ ಸಿದ್ರಾಮಪ್ಪ ಹೊಲದವರೆಗೆ ರಸ್ತೆ" – ವೈಯಕ್ತಿಕ ಹೊಲದಲ್ಲಿ ರಸ್ತೆ ಕಾಮಗಾರಿ ಮಾಡದೆ ಬಿಲ್ಲು ಸೃಷ್ಟಿಸಿ ಹಣ ದುರುಪಯೋಗ ಮಾಡಿರುತ್ತಾರೆಂಬ ಆರೋಪವು ಸಾಬೀತಾಗಿರುವುದಿಲ್ಲ.

2. ಪಂಚಾಯತ್‌ನ ಇತರೆ ಯೋಜನೆಗಳಾದ 13ನೇ ಹಣಕಾಸು, ಬಿಆರ್‌ಜಿಎಫ್, ನಿರ್ಮಲ ಭಾರತ ಯೋಜನೆಯಡಿಯಲ್ಲಿ ಶೌಚಾಲಯವನ್ನು ನಿರ್ಮಾಣ ಮಾಡದೇ ಹಣ ದುರುಪಯೋಗ ಪಡಿಸಿಕೊಂಡಿರುತ್ತಾರೆಂಬ ದೂರಿನ ಬಗ್ಗೆ ದಾಖಲೆಗಳು ಹಾಗೂ ನಿರ್ಧಿಷ್ಟ ಕಾಮಗಾರಿಗಳನ್ನು ಸೂಚಿಸದಿರುವುದರಿಂದ ಸದರಿ ಆರೋಪದ ಕುರಿತು ಮಾಹಿತಿ ನೀಡುವಂತೆ ಕೋರಿದಾಗ ದೂರುದಾರರು ಯಾವುದೇ ಮಾಹಿತಿ ದಾಖಲೆಗಳಿರುವುದಿಲ್ಲವೆಂದು ತಿಳಿಸಿದ ಕಾರಣ ಈ ಆರೋಪವನ್ನು ಪರಿಶೀಲಿಸಲು ಸಾಧ್ಯವಾಗಿರುವುದಿಲ್ಲ.

3. ಕರ ವಸೂಲಾತಿ ಹಣದಲ್ಲಿ ಭಾರಿ ಅವ್ಯವಹಾರವಾಗಿರುವುದು ಕಂಡುಬಂದಿರುತ್ತದೆ ಎಂಬ ಆರೋಪವನ್ನು ಪರಿಶೀಲಿಸಿದಾಗ ನರೋಣ ಗ್ರಾಮ ಪಂಚಾಯಿತಿಯಲ್ಲಿ ಕರವಸೂಲಾತಿಯ ರಿಜಿಸ್ಟರ್ ಮತ್ತು ಬ್ಯಾಂಕ್ ಸ್ಟೇಟ್‌ಮೆಂಟ್ ದಾಖಲೆಗಳನ್ನು ಪರಿಶೀಲಿಸಿದಾಗ ಅವುಗಳನ್ನು ನಿಯಮಾನುಸಾರ ಇಟ್ಟಿರುವುದನ್ನು ಗಮನಿಸಿ, ದೂರುದಾರರಿಗೆ ತೋರಿಸಿ "ಎಲ್ಲಿ ಅವ್ಯವಹಾರವಾಗಿದೆ ತೋರಿಸಿರಿ" ಎಂದು ಕೇಳಿದಾಗ, ದೂರುದಾರರು ಯಾವುದೇ ಪ್ರತಿಕ್ರಿಯೆ ನೀಡದೆ ಸುಮ್ಮನಾಗಿದ್ದರಿಂದ, ಈ ಆರೋಪವು ಸಾಬೀತಾಗಿರುವುದಿಲ್ಲವೆಂದು ಅಭಿಪ್ರಾಯಪಟ್ಟಿರುತ್ತಾರೆ.

ಮಾನ್ಯ ಉಪಲೋಕಾಯುಕ್ತ–1ರವರು ತನಿಖಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಿದ್ದು, ಈ ಕೆಳಕಂಡ ಲೋಪಗಳನ್ನು ಗುರುತಿಸಿರುತ್ತಾರೆ :–

- ಸದರಿ ಕಾಮಗಾರಿಯನ್ನು ಅಂದಾಜು ಪಟ್ಟಿಯಲ್ಲಿ ನಿಗದಿಪಡಿಸಿದಂತೆ ಕಾಮಗಾರಿಯ ಅಳತೆಗಳನ್ನು ನಿಯಮಿತವಾಗಿ ಅಳತೆ ಪುಸ್ತಕದಲ್ಲಿ ನಮೂದಿಸದೆ, ಒಂದೇ ದಿನ ಅಂದರೆ ದಿನಾಂಕ : 04.02.2014ರಂದು ಎಂ.ಬಿ. ಪುಸ್ತಕದ ಪುಟ : 76–77ರಲ್ಲಿ ನಮೂದಿಸಿರುವುದರಿಂದ ಕಾಮಗಾರಿಯನ್ನು ನಿಯತಕಾಲಿಕವಾಗಿ ನಿರ್ವಹಣೆ ಮಾಡಿಲ್ಲದಿರುವುದು;

- ಕಾಮಗಾರಿ ಪ್ರಾರಂಭ ಮಾಡಿದ ಹಾಗೂ ಮುಕ್ತಾಯ ಮಾಡಿದ ಬಗೆಗಿನ ಮಾಹಿತಿ ಎಂ.ಬಿ. ಪುಸ್ತಕದಲ್ಲಿ ನಮೂದಾಗಿಲ್ಲದಿರುವುದು;
- ಸದರಿ ರಸ್ತೆಯ ಬದಿಯಲ್ಲಿ ಚರಂಡಿ ಕಾಮಗಾರಿಯನ್ನು ಅನುಷ್ಠಾನಗೊಳಿಸದಿದ್ದರೂ ಸಹ ಅನುಷ್ಠಾನಗೊಳಿಸಿದೆ ಎಂದು ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ ರೂ. 43911/-ಗಳನ್ನು ಎಂ.ಬಿ ಪುಸ್ತಕದಲ್ಲಿ ನಮೂದಿಸಿ ಹಣವನ್ನು ದುರುಪಯೋಗಪಡಿಸಿಕೊಂಡಿರುವುದು;
- ಅಲ್ಲದೇ, ಸ್ಥಳೀಯ ಲೆಕ್ಕ ಪರಿಶೋಧನಾ ಸಂದರ್ಭದಲ್ಲಿ ಗ್ರಾಮ ಪಂಚಾಯತಿಯಿಂದ ವಸೂಲಿ ಮಾಡಿದ ಒಟ್ಟು ಉಪಕರ ಮೊತ್ತ 3,42,602/-ರೂ.ಗಳನ್ನು ಸಂಬಂಧಪಟ್ಟ ಇಲಾಖೆಗಳಿಗೆ ಜಮೆ ಮಾಡಿರುವುದಿಲ್ಲವೆಂದು, ಖಾತೆಯಲ್ಲಿನ ಶಿಲ್ಕು ರೂ. 3,31,968/- ಮಾತ್ರ ಇದ್ದು, ವ್ಯತ್ಯಾಸದ ಮೊತ್ತ ರೂ. 3,31,968/-ಗಳನ್ನು ವೆಚ್ಚ ಮಾಡಿ ತಾತ್ಕಾಲಿಕ ಹಣ ದುರುಪಯೋಗಪಡಿಸಿಕೊಂಡಿರುವುದು ಕಂಡುಬಂದ ಕಾರಣ ಸ್ಥಳೀಯ ಲೆಕ್ಕ ಪರಿಶೋಧನಾ ವರದಿಯಲ್ಲಿ ಸದರಿ ಮೊತ್ತವನ್ನು ವಸೂಲಾತಿಗೆ ಸೂಚಿಸಿರುವುದು;

ಮೇಲಿನ ಅಂಶಗಳ ಬಗ್ಗೆ ಲೋಕಾಯುಕ್ತ ಕಚೇರಿಯು ಆಪಾದಿತರಿಂದ ಆಕ್ಷೇಪಣೆಯನ್ನು ಕೇಳಲಾಗಿದ್ದು, ಶ್ರೀ ಸಂತೋಷ ಎಸ್.ಆರ್., ಪಂ.ಅ.ಅ., ರವರು ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ಈ ತಾತ್ಕಾಲಿಕ ಹಣ ದುರುಪಯೋಗ ಮೊತ್ತವು ಕಳೆದ ಹಲವು ವರ್ಷಗಳಿಂದ ಬಾಕಿ ಇರುವ ಮೊತ್ತವಾಗಿದ್ದು, ಈ ಸಾಲಿಗೆ ರೂ. 43,779/-ಮಾತ್ರ ಸಂಬಂಧಿಸಿದ್ದೆಂದು, ಈ ಮೊತ್ತಕ್ಕೆ ಅನುಪಾಲನಾ ವರದಿಯನ್ನು ಚುನಾವಣಾ ಕರ್ತವ್ಯ ಮುಗಿಸಿದ ನಂತರ ಸ್ಥಳೀಯ ಲೆಕ್ಕ ಪರಿಶೋಧನಾ ವರ್ತುಲ ರವರಿಗೆ ಸಲ್ಲಿಸುವುದಾಗಿ ತಿಳಿಸಿರುತ್ತಾರೆ. ಶ್ರೀ ನಾಗಮೂರ್ತಿ ಕೆ.ಎಸ್., ಕಿ.ಇಂ., ಹಾಗೂ ಶ್ರೀ ಅಬ್ದುಲ್ ಸಲಾಂ, ಸ.ಕಾ.ಇಂ.(ಹಾಲಿ ನಿವೃತ್ತ) ಇವರುಗಳು ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ಕೆಲಸದ ಒತ್ತಡದಿಂದಾಗಿ ಕಾಮಗಾರಿಯನ್ನು ಹಂತ ಹಂತವಾಗಿ ಪರಿವೀಕ್ಷಣೆ ಮಾಡಿರುವ ದಿನಾಂಕ, ಕಾಮಗಾರಿಯನ್ನು ಪ್ರಾರಂಭಿಸಿದ ಮತ್ತು ಮುಕ್ತಾಯಗೊಳಿಸಿದ ದಿನಾಂಕಗಳನ್ನು ಅಳತೆ ಪುಸ್ತಕದಲ್ಲಿ ದಾಖಲಿಸಲು ಸಾಧ್ಯವಾಗಿರುವುದಿಲ್ಲವೆಂದು, ಗ್ರಾಮ ಪಂಚಾಯತಿಯ ಸದಸ್ಯರು ಹಾಗೂ ಅಧ್ಯಕ್ಷರ ಕೋರಿಕೆಯ ಮೇರೆಗೆ ನಂತರದಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯುವ ಉದ್ದೇಶದಿಂದ ರಸ್ತೆಯ ಎರಡೂ ಬದಿಗೂ ಚರಂಡಿ ಕಾಮಗಾರಿಯನ್ನು ಅನುಷ್ಠಾನಗೊಳಿಸಲಾಗಿದೆಯೆಂದೂ, ತಮ್ಮಿಂದ ಯಾವುದೇ ಲೋಪ ಆಗಿಲ್ಲದ ಕಾರಣ ಪ್ರಕರಣದಿಂದ ಕೈ ಬಿಡುವಂತೆ ಕೋರಿರುತ್ತಾರೆಂದು ತಿಳಿಸಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರವರು ಆಪಾದಿತರು ಸಲ್ಲಿಸಿರುವ ಲಿಖಿತ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ, ಎಂ.ಜಿ.ಎನ್.ಆರ್.ಇ.ಜಿ.ಎ., ಯೋಜನೆಯಡಿ ಕೈಗೆತ್ತಿಕೊಳ್ಳುವ ಕಾಮಗಾರಿಗಳನ್ನು, ಗ್ರಾಮದ ಹಂತದಲ್ಲಿ ಗ್ರಾಮಸಭೆ ಗುರುತಿಸಿ ಗ್ರಾಮ ಪಂಚಾಯತ್ ಅನುಮೋದಿಸುವ; ತಾಲ್ಲೂಕು ಮಟ್ಟದಲ್ಲಿ ತಾಲ್ಲೂಕು ಪಂಚಾಯತ್ ಅನುಮೋದಿಸುವ; ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯತ್ ಅನುಮೋದಿಸುವ ಕಾಮಗಾರಿಗಳನ್ನು ಮಾತ್ರ ತೆಗೆದುಕೊಳ್ಳತಕ್ಕದ್ದೆಂದು ಸರ್ಕಾರದಿಂದ ಆದೇಶ ಹೊರಡಿಸಲಾಗಿದೆಯೆಂದು, ಅಲ್ಲದೇ ಸದರಿ ಆಪಾದಿತರುಗಳು ಸಲ್ಲಿಸಿರುವ ಕಾಮಗಾರಿಯ ಛಾಯಾಚಿತ್ರದಲ್ಲಿ ಚರಂಡಿಯನ್ನು ನಿರ್ಮಿಸಿರುವುದು ಕಂಡುಬರುವುದಿಲ್ಲವೆಂದು, ಅಲ್ಲದೆ, ತಾತ್ಕಾಲಿಕವಾಗಿ ಸರ್ಕಾರದ ಹಣವನ್ನು

ದುರುಪಯೋಗಪಡಿಸಿಕೊಂಡಿರುವುದು ಸ್ಥಳೀಯ ಲೆಕ್ಕಪರಿಶೋಧನಾ ವರದಿಯಿಂದ ಕಂಡುಬಂದಿದ್ದು, ಹಾಗಾಗಿ ಸದರಿ ಆಪಾದಿತರುಗಳು ಸಲ್ಲಿಸಿರುವ ಲಿಖಿತ ಹೇಳಿಕೆಯಲ್ಲಿ ಪರಿಗಣಿಸಬಹುದಾದ ಅಂಶಗಳೇನು ಕಂಡುಬರುವುದಿಲ್ಲವೆಂದು, ಈ ಮೇಲಿನ ಲೋಪಕ್ಕೆ ಸರ್ಕಾರಿ ನೌಕರರಾದ ಈ ಕೆಳಕಂಡವರು ಕಾರಣರಾಗಿರುತ್ತಾರೆಂದು, ಸದರಿಯವರು ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಶಿಸ್ತುಕ್ರಮಕ್ಕೆ ಗುರಿಯಾಗಿರುತ್ತಾರೆಂದು, ಹಾಗಾಗಿ ಅವರುಗಳ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

1. ಶ್ರೀ ಸಂತೋಷ.ಎಸ್.ಆರ್., ಪಂಚಾಯತ್ ಅಭಿವೃದ್ಧಿ ಅಧಿಕಾರಿ, ನರೋಣ ಗ್ರಾಮ ಪಂಚಾಯತ್, ಆಳಂದ ತಾಲ್ಲೂಕ್
2. ಶ್ರೀ ನಾಗಮೂರ್ತಿ.ಕೆ.ಎಸ್., ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಆಳಂದ
3. ಶ್ರೀ ಅಬ್ದುಲ್ ಸಲಾಂ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಆಳಂದ

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ / ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಆಳಂದ ತಾಲ್ಲೂಕು, ನರೋಣ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ 2013-14 & 2014-15ನೇ ಸಾಲಿನಲ್ಲಿ MGNREGA ಯೋಜನೆಯಡಿ ಕೈಗೊಳ್ಳಲಾದ "ಭೀಮಾಬಾಯಿ ದಾದು ಹೊಲದಿಂದ ಮಲ್ಲಿಕಾರ್ಜುನ ಸಿದ್ರಾಮಪ್ಪ ಹೊಲದವರೆಗಿನ ರಸ್ತೆ" ಕಾಮಗಾರಿಯನ್ನು ಮಂಜೂರಾದ ಅಂದಾಜು ಪಟ್ಟಿಯಂತೆ ನಿರ್ವಹಿಸದೆ ಇರುವುದು; ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯದೆ ಇರುವುದು; ಸದರಿ ರಸ್ತೆಯ ಬದಿಯಲ್ಲಿ ಚರಂಡಿ ನಿರ್ಮಿಸದೆ ಇದ್ದರೂ ಸಹ ಚರಂಡಿ ನಿರ್ಮಿಸಿರುವಂತೆ ಖೊಟ್ಟಿ ದಾಖಲೆಗಳನ್ನು ಸೃಷ್ಟಿಸಿ ಎಂ.ಬಿ. ಪುಸ್ತಕದಲ್ಲಿ ರೂ. 43,911/- ಗಳನ್ನು ದಾಖಲಿಸಿ ಸರ್ಕಾರದ ಹಣ ದುರುಪಯೋಗಪಡಿಸಿಕೊಂಡಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಹಾಗಾಗಿ ಮೇಲ್ಕಂಡ 3 ಅಧಿಕಾರಿ / ನೌಕರರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿ ಹಣ ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವೆಂದು ಕಂಡುಬರುತ್ತದೆ.

ಆದ್ದರಿಂದ, ಪ್ರಕರಣದಲ್ಲಿ ಭಾಗಿಯಾಗಿರುವ 3 ಜನ ಆಪಾದಿತರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ವಿವರವಾದ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ : ಗ್ರಾಅಪ 73 ಇಎನ್‌ಕ್ಯೂ 2018 ಬೆಂಗಳೂರು, ದಿನಾಂಕ. 22.11.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಕೆಳಕಂಡ ನೌಕರರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ

(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸಲು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ :-

1. ಶ್ರೀ ಸಂತೋಷ.ಎಸ್.ಆರ್., ಪಂಚಾಯತ್ ಅಭಿವೃದ್ಧಿ ಅಧಿಕಾರಿ, ನರೋಣ ಗ್ರಾಮ ಪಂಚಾಯತ್, ಆಳಂದ ತಾಲ್ಲೂಕ್
2. ಶ್ರೀ ನಾಗಮೂರ್ತಿ.ಕೆ.ಎಸ್., ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಆಳಂದ

ಪ್ರಕರಣದಲ್ಲಿ ಭಾಗಿಯಾಗಿರುವ ಮತ್ತೊಬ್ಬ ಆಪಾದಿತ ಅಧಿಕಾರಿಯಾದ ಶ್ರೀ ಅಬ್ದುಲ್ ಸಲಾಂ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ-ವಿಭಾಗ, ಆಳಂದ ಇವರು ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 13ನ್ನು ಓದಿಕೊಂಡಂತೆ ನಿಯಮ 11ರಂತೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 (2)(ಬಿ)(ii) ರಡಿ ಮಂಜೂರಾತಿ ನೀಡಿ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ-1ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

22/11/2018

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು  ಮುಖ ಪತ್ರದೊಂದಿಗೆ
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
8. ನಿರ್ದೇಶಕರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

9. ಸಂಬಂಧಪಟ್ಟ ಆಪಾದಿತ ಅಧಿಕಾರಿ / ನೌಕರರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ ಇವರ ಮುಖಾಂತರ.
10. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
12. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ (ಸೇವೆಗಳು-ಎ & ಸಿ)
13. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.